# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್ 177(145) ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರಾದ ಶ್ರೀ. ಮಹಾಂತೇಶ್ ಬುರನಾಪುರ ಕಾರ್ಯಪಾಲಕ ಅಭಿಯಂತರರು (ಯೋಜನೆ–ದಕ್ಷಿಣ) ಮತ್ತು ನೋಡಲ್ ಅಧಿಕಾರಿ ಅಪ್ಪಣೆ ಮೇರೆಗೆ ದಿನಾಂಕ:18/11/2022ರ ಶುಕ್ರವಾರದಂದು ಬೆಳಗ್ಗೆ 10.30 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಶ್ರೀ. ಮಹಾಂತೇಶ್ ಬುರನಾಪುರ ಕಾರ್ಯಪಾಲಕ ಅಭಿಯಂತರರು (ಯೋಜನೆ–ದಕ್ಷಿಣ) ಮತ್ತು ನೋಡಲ್ ಅಧಿಕಾರಿ.
2. ಶ್ರೀ. ವಿಜಯಕುಮಾರ್ ಕೆ.ಎಸ್. ಸಹಾಯಕ ಅಭಿಯಂತರರು ವಾರ್ಡ್–177.
3. ಶ್ರೀ. ಆರ್. ಉಮಾಶಂಕರ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–177.
4. ಕುಮಾರಿ. ರುಚಿತಾ, ಸಹಾಯಕ ಅಭಿಯಂತರರು (ಹೊರಗುತ್ತಿಗೆ) ವಾರ್ಡ್ 177(145)
5. ವಾರ್ಡಿನ ಸ್ಥಳೀಯರಾದ ಶ್ರೀ. ಪದ್ಮನಾಭ, ಶ್ರೀ. ಪಿ. ದಯಾನಂದ, ಶ್ರೀ. ಪ್ರಶಾಂತ್, ಶ್ರೀ/ಶ್ರೀಮತಿ. ಜ್ಯೋತಿ ಸಚ್ಚಿದಾನಂದ, ಶ್ರೀ. ರಮೇಶ್ ನಾರಾಯಣ್, ಶ್ರೀ. ಕಿಶೋರ್ ಟಿ.ಎಸ್. ಶ್ರೀಮತಿ. ರೇಖಾ ಶಂಕರ್, ಡಾ॥ ಶ್ರೀಕಾರ್ ಆಚಾರ್, ಶ್ರೀ ಚಾರ್ಲ್ಸ್ ಕೆ.ಎಸ್. ಶ್ರೀ. ಸಂದೀಪ್ ಎ.

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ಪೊಲೀಸ್ ಇಲಾಖೆ ಅಧಿಕಾರಿಗಳು ಕಾನೂನು ಸುವ್ಯವಸ್ಥೆ ಆಡುಗೋಡಿ.
2. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ & ಸಂಚಾರ ವಾರ್ಡ್ 177.
3. ಸಹಾಯಕ ಇಂಜಿನಿಯರ್ (ಬೆಸ್ಕಾಂ).
4. ಅರಣ್ಯ ಇಲಾಖೆಯ ಅಧಿಕಾರಿಗಳು.
5. ತೋಟಗಾರಿಕೆ ಇಲಾಖೆ, ಮೇಲ್ವಿಚಾರಕರು ವಾರ್ಡ್ 177.
6. ಸಹಾಯಕ ಇಂಜಿನಿಯರ್ (BWSSB).
7. ಸ.ಕಾ.ನಿ. ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ, ಬಿಬಿಎಂಪಿ ಕೇಂದ್ರ ಕಛೇರಿ.
8. ಸ.ಕಾ.ನಿ. ಅಭಿಯಂತರರು, ಯೋಜನೆ–ಕೇಂದ್ರ, ಬಿಬಿಎಂಪಿ ಕೇಂದ್ರ ಕಛೇರಿ.



Scanned with CamScanner

9. ಸ.ಕಾ.ನಿ. ಅಭಿಯಂತರರು, ಬೃಹತ್ ನೀರುಗಾಲುವೆ ಬಿಬಿಎಂಪಿ ಜಯನಗರ ವಾಣಿಜ್ಯ ಸಂಕೀರ್ಣ ಕಟ್ಟಡ.
10. ಸಹಾಯಕ ನಿರ್ದೇಶಕರು, ಪಶು ಸಂಗೋಪನಾ ಇಲಾಖೆ, ದಾಸಪ್ಪ ಆಸ್ಪತ್ರೆ, ಬಿಬಿಎಂಪಿ. ಬೆಂಗಳೂರು.

1. ವಾರ್ಡಿನ ಸ್ಥಳೀಯರು ಮಾತನಾಡಿ HDD ಮೆಥೆಡ್‌ನಲ್ಲಿ OFC ಕೇಬಲ್ ಅಳವಡಿಕೆಗಾಗಿ ಅನಧಿಕೃತವಾಗಿ ರಸ್ತೆ ಅಗೆಯುತ್ತಿರುವವರ ವಿರುದ್ಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸುವಂತೆ ಕೋರಿರುತ್ತಾರೆ. ಈ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡಿನ ಅಭಿಯಂತರರು ಮಾತನಾಡಿ ಈಗಾಗಲೇ ಪೊಲೀಸ್ ಠಾಣೆಗೆ ದೂರನ್ನು ನೀಡಲಾಗಿರುತ್ತದೆ ಎಂದು ತಿಳಿಸಿದರು.
2. BMTC ಇಲಾಖೆಯ ಅಧಿಕಾರಿಗಳು ಇನ್ನು ಮುಂದೆ ನಡೆಯುವ ವಾರ್ಡ್ ಕಮಿಟಿ ಸಭೆಗಳಿಗೆ ಹಾಜರಾಗುವಂತೆ ಪತ್ರ ಬರೆಯಲು ಸೂಚಿಸಿದರು.
3. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ 6ನೇ ಅಡ್ಡರಸ್ತೆ ಮಾರ್ಗವಾಗಿ ಬಿ.ಎಂ.ಟಿ.ಸಿ ಬಸ್‌ಗಳು ಬರದೆ ಸಂಚಾರಕ್ಕೆ ತೊಂದರೆಯಾಗುತ್ತಿರುವುದಾಗಿ ತಿಳಿಸಿದರು.
4. ವಾರ್ಡಿನ ಸ್ಥಳೀಯರು ಮಾತನಾಡಿ 13ನೇ "ಎ" ಅಡ್ಡರಸ್ತೆ ಹಾಗೂ 8ನೇ ಮುಖ್ಯರಸ್ತೆ ವಿಲ್ಸನ್‌ಗಾರ್ಡನ್ ಇಲ್ಲಿ ಮ್ಯಾನ್ ಹೋಲ್ ತಗ್ಗಿನಲ್ಲಿದ್ದು ಎತ್ತರಿಸುವಂತೆ ಕೋರಿದರು.
5. ವಾರ್ಡಿನ ಸ್ಥಳೀಯರು ಮಾತನಾಡಿ 12ನೇ ಅಡ್ಡರಸ್ತೆ ಪೋಸ್ಟ್ ಆಫೀಸ್ ರಸ್ತೆ ಮತ್ತು 8ನೇ ಅಡ್ಡರಸ್ತೆ ಇಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಸದರಿ ವಿಷಯಕ್ಕೆ ಸಂಬಂಧಿಸಿದಂತೆ ರಸ್ತೆ ಮತ್ತು ಮೂಲಭೂತ ಸೌಕರ್ಯ, ಕೇಂದ್ರ ಕಛೇರಿ ರವರಿಗೆ ಈ ಬಗ್ಗೆ ಪತ್ರ ಬರೆಯುವಂತೆ ತಿಳಿಸಿದರು.
6. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ವ್ಯಾಪ್ತಿಯ ಬಿ.ಟಿ.ಎಸ್ ರಸ್ತೆಯಲ್ಲಿ ಅಲ್ಲಲ್ಲಿ ಹದಗೆಟ್ಟಿದ್ದು, ಸರಿಪಡಿಸುವಂತೆ ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಸದರಿ ವಿಷಯಕ್ಕೆ ಸಂಬಂಧಿಸಿದಂತೆ ರಸ್ತೆ ಮತ್ತು ಮೂಲಭೂತ ಸೌಕರ್ಯ, ಕೇಂದ್ರ ಕಛೇರಿ ರವರಿಗೆ ಈ ಬಗ್ಗೆ ಪತ್ರ ಬರೆಯುವಂತೆ ತಿಳಿಸಿದರು.



Scanned with CamScanner

7. ನೋಡಲ್ ಅಧಿಕಾರಿಯವರು ಮಾತನಾಡಿ ವಾರ್ಡ್ ವ್ಯಾಪ್ತಿಯ ಎಲ್ಲಾ ಮುಖ್ಯರಸ್ತೆಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಕೋರಿ ರಸ್ತೆ ಮತ್ತು ಮೂಲಭೂತ ಸೌಕರ್ಯ ರವರಿಗೆ ಪತ್ರ ಬರೆಯಲು ಸೂಚಿಸಿದರು.

8. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ವ್ಯಾಪ್ತಿಯ ಕಸದ ಬ್ಲಾಕ್ ಸ್ಪಾಟ್‌ಗಳಲ್ಲಿ ಮಾರ್ಷಲ್‌ಗಳನ್ನು ನಿಯೋಜಿಸುವಂತೆ ಕೋರಿದರು

9. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಅಳವಡಿಸಿರುವ ಸಿ.ಸಿ. ಕ್ಯಾಮರಾಗಳ ಬಗ್ಗೆ ಗಮನ ಹರಿಸಬೇಕೆಂದು ಕೋರಿದರು.

10. ವಾರ್ಡಿನ ಸ್ಥಳೀಯರು ಮಾತನಾಡಿ ಹರಿಲಕ್ಷ್ಮಿ ಥಿಯೇಟರ್ ಹತ್ತಿರ ಕಸದ ಸಮಸ್ಯೆ ಹೆಚ್ಚಾಗಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

11. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ ಪ್ರದೇಶದಲ್ಲಿ ಹೂವಿನ ಅಂಗಡಿಗಳು ಮತ್ತೆ ತೆರೆದಿದ್ದು, ಸದರಿಯವರ ವಿರುದ್ಧ ಸೂಕ್ತ ಕ್ರಮ ವಹಿಸಲು ಆರೋಗ್ಯ ವೈದ್ಯಾಧಿಕಾರಿಗಳು ರವರಿಗೆ ತಿಳಿಸುವಂತೆ ಸಭೆಯಲ್ಲಿ ಕೋರಿದರು.

12. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ವ್ಯಾಪ್ತಿಯ ಸುತ್ತಲೂ ಪಾದಚಾರಿ ರಸ್ತೆಗಳಲ್ಲಿ ಕತ್ತರಿಸಿ ಬಿದ್ದಿರುವ ರೆಂಬೆ ಕೊಂಬೆಗಳನ್ನು ತೆರವುಗೊಳಿಸಲು ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ರವರಿಗೆ ತಿಳಿಸುವಂತೆ ಸಭೆಯಲ್ಲಿ ಕೋರಿದರು.

13. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿನ ಕಟ್ಟಡಗಳ ನಕ್ಷೆ ಪರಿಶೀಲನೆ ಮಾಡುವಂತೆ ಕೋರಿದರು. ನೋಡಲ್ ಅಧಿಕಾರಿಯವರು ಮಾತನಾಡಿ ಸದರಿ ವಿಷಯವು ಸಹಾಯಕ ನಿರ್ದೇಶಕರು (ನಗರ ಯೋಜನೆ) ರವರ ಕಛೇರಿ ವ್ಯಾಪ್ತಿಗೆ ಒಳಪಟ್ಟಿರುವುದಾಗಿ ತಿಳಿಸಿದರು.

14. ವಾರ್ಡಿನ ಸ್ಥಳೀಯರು ಮಾತನಾಡಿ 8ನೇ ಅಡ್ಡರಸ್ತೆ ವಿಲ್ಸನ್‌ಗಾರ್ಡನ್‌ನ ಪಾದಚಾರಿ ಮಾರ್ಗದಲ್ಲಿ ಸ್ಲಾಬ್ ಹಾಳಾಗಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

15. ವಾರ್ಡಿನ ಸ್ಥಳೀಯರು ಮಾತನಾಡಿ ನಂ. 8, 5ನೇ ಅಡ್ಡರಸ್ತೆ, ವಿಲ್ಸನ್‌ಗಾರ್ಡನ್‌ನಲ್ಲಿ ರೆಂಬೆ ಕೊಂಬೆಗಳನ್ನು ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಕತ್ತರಿಸುತ್ತಿದ್ದು, ಇತ್ತೀಚೆಗೆ 02 ತಿಂಗಳುಗಳಿಂದ ರೆಂಬೆ ಕೊಂಬೆಗಳನ್ನು ಕತ್ತರಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ತಿಳಿಸಿದರು.



Scanned with CamScanner

16. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಒಣತ್ಯಾಜ್ಯ ಕಸ ಹಾಕಲು ಪ್ರತ್ಯೇಕ ಜಾಗವನ್ನು ಒದಗಿಸಿಕೊಡಬೇಕೆಂದು ಸಭೆಯಲ್ಲಿ ತಿಳಿಸಿದರು.

17. ವಾರ್ಡಿನ ಸ್ಥಳೀಯರು ಮಾತನಾಡಿ ಸ್ಟ್ರೀಟ್ ಲೈಟ್‌ಗಳ ಮೇಲ್ವಿಚಾರಣೆ ಸಮರ್ಪಕವಾಗಿ ನಿರ್ವಹಿಸುತ್ತಿಲ್ಲವೆಂದು ಸಭೆಯಲ್ಲಿ ತಿಳಿಸಿದರು.

18. ವಾರ್ಡಿನ ಸ್ಥಳೀಯರು ಮಾತನಾಡಿ 10ನೇ ಅಡ್ಡರಸ್ತೆ, 8ನೇ ಮುಖ್ಯರಸ್ತೆ ಡಾಂಬರೀಕರಣ ಕಾಮಗಾರಿ ಕೈಗೊಳ್ಳಬೇಕಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

19. ವಾರ್ಡಿನ ಸ್ಥಳೀಯರು ಮಾತನಾಡಿ ಲಕ್ಕಸಂದ್ರ 15ನೇ ಅಡ್ಡರಸ್ತೆಯ ಹತ್ತಿರ ಇರುವ ಸ್ಕೈ ವಾಕ್ ನಿರ್ವಹಣೆ ಸಮರ್ಪಕವಾಗಿ ಮಾಡುವಂತೆ ಸಭೆಯಲ್ಲಿ ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಸಹಾಯಕ ಕಾರ್ಯಪಾಲಕ ಅಭಿಯಂತರರು, ಟ್ರಾಫಿಕ್ ಇಂಜಿನಿಯರಿಂಗ್ ಸೆಲ್, ರವರೊಂದಿಗೆ ಮಾತನಾಡಿದರು. ಸದರಿ ಸ್ಕೈವಾಕ್‌ನ ಟೆಂಡರ್ ಮುಗಿದಿದ್ದು, ರಿ-ಟೆಂಡರ್ ಕರೆದು ಮರು ಉದ್ಘಾಟನೆ ಮಾಡಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

20. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಅಹಿತಕರ ಚಟುವಟಿಕೆಗಳು ಹೆಚ್ಚಾಗಿರುವುದರಿಂದ ರಾತ್ರಿ ಪಾಳಿ ಪೋಲೀಸರು ಗಸ್ತು ಹಾಕಿ ಇವುಗಳನ್ನು ತಡೆಗಟ್ಟುವಂತೆ ಕೋರಿರುತ್ತಾರೆ.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 177(145)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 177(145)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
24/11/22



Scanned with CamScanner